# ಕರ್ನಾಟಕ ಸರ್ಕಾರ

## ಸಾರ್ವಜನಿಕ ಶಿಕ್ಷಣ ಇಲಾಖೆ

**ಆಯುಕ್ತರ ಕಛೇರಿ, ಹೊಸ ಸಾರ್ವಜನಿಕ ಕಛೇರಿಗಳು, ನೃಪತುಂಗ ರಸ್ತೆ, ಬೆಂಗಳೂರು-560001**

ಸಂಖ್ಯೆ : ಇ-ಆಡಳಿತ:ಅನು:2015-16 ದಿನಾಂಕ : 13.01.2016

**-: ಜ್ಞಾಪನಾ :-**

**ವಿಷಯ : "ಸಮರ್ಪಕ ಇ-ಆಡಳಿತ ಅನುಷ್ಠಾನಗೊಳಿಸುವ ಬಗ್ಗೆ".**

- - -

1. ಸಾರ್ವಜನಿಕ ಶಿಕ್ಷಣ ಇಲಾಖೆಯಲ್ಲಿ ಹಂತ-ಹಂತವಾಗಿ ಇ-ಆಡಳಿತವನ್ನು ಜಾರಿಗೊಳಿಸಲಾಗುತ್ತಿದೆ. ಶಾಲಾ ಹಂತದಲ್ಲಿಯೂ ಕೂಡ ಇದನ್ನು ಜಾರಿಗಳಿಸುವ ಒಂದು ಪ್ರಯತ್ನ ಸಾಗುತ್ತಿದೆ. ಆದ್ದರಿಂದ ಎಲ್ಲಾ ಸರ್ಕಾರಿ, ಅನುದಾನಿತ ಹಾಗೂ ಅನುದಾನರಹಿತ ಶಾಲೆಗಳ ಇ-ಮೇಲ್ ಐಡಿ ಹಾಗೂ ಮೊಬೈಲ್ ನಂಬರ್‌ಗಳು ಅಗತ್ಯವಿದೆ.
2. ಮುಂದಿನ ದಿನಗಳಲ್ಲಿ ಯಾವುದೇ ಮಾಹಿತಿಯನ್ನು ರವಾನಿಸಲು ಇ-ಮೇಲ್ ಐಡಿ ಹಾಗೂ ಮೊಬೈಲ್ ನಂಬರ್‌ಗಳನ್ನು ಬಳಸಲಾಗುತ್ತದೆ. ಇ-ಮೇಲ್ ಐಡಿ ಇಲ್ಲದೇ ಇರುವ ಶಾಲೆಗಳ ಇ-ಮೇಲ್ ಐಡಿಯನ್ನು ಹೊಸದಾಗಿ ಸೃಜಿಸಿ ಸಲ್ಲಿಸಬೇಕೆಂದು ಸೂಚಿಸಲಾಗಿದೆ.
3. ಈ ಸಂಬಂಧ ತಂತ್ರಾಂಶವನ್ನು ಅಭಿವೃದ್ಧಿ ಪಡಿಸಲಾಗಿದೆ. ಇಲಾಖೆ ವೆಬ್‌ಸೈಟ್ www.schooleducation.kar.nic.in ನಲ್ಲಿ "Enter School Basic Details" ಎಂಬ ಶೀರ್ಷಿಕೆಯಡಿಯಲ್ಲಿ ಇದು ಸಿಗುತ್ತದೆ. ರಾಜ್ಯದ 204 ಬ್ಲಾಕ್‌ನಲ್ಲಿರುವ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು ತಮ್ಮ ಅಧೀನದಲ್ಲಿ ಬರುವ ಶಾಲೆಗಳಿಗೆ ಮಾಹಿತಿಯನ್ನು ನೀಡಿ ತಂತ್ರಾಂಶದಲ್ಲಿ ದಿನಾಂಕ : 16.01.2016 ರೊಳಗೆ ನೋಂದಾಯಿಸಲು ಸೂಚಿಸಲಾಗಿದೆ.

13/1/16

(ಕೆ.ಎಸ್. ಸತ್ಯಮೂರ್ತಿ),
ಆಯುಕ್ತರು,
ಸಾರ್ವಜನಿಕ ಶಿಕ್ಷಣ ಇಲಾಖೆ

1) ರಾಜ್ಯದ ಎಲ್ಲಾ 34 ಜಿಲ್ಲೆಗಳಲ್ಲಿನ 204 ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಸೂಕ್ತ ಕ್ರಮಕ್ಕಾಗಿ.
2) ರಾಜ್ಯದ ಎಲ್ಲಾ 34 ಜಿಲ್ಲೆಗಳಲ್ಲಿನ ಉಪನಿರ್ದೇಶಕರುಗಳಿಗೆ ಮಾಹಿತಿಗಾಗಿ.